# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 349 (446)

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ. ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 07.12.2023

ಉತ್ತರಿಸಬೇಕಾದ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಉತ್ತರ ಕರ್ನಾಟಕದ ರೈತರ ಬದುಕಿಗೆ ಆಸರೆಯಾಗುವ ಉದ್ದೇಶದಿಂದ 1964 ರಂದು ಪ್ರಾರಂಭಿಸಲಾದ ಕೃಷ್ಣಾ ಮೇಲ್ದಂಡೆ ಯೋಜನೆಯು ಆಮೆಗತಿಯಲ್ಲಿ ಸಾಗಿದ ಕಾರಣ 2010 ರಲ್ಲಿ ಕೃಷ್ಣ ನ್ಯಾಯಾದೀಕರಣ ನೀಡಿದ 130 ಟಿಎಂಸಿ ನೀರು ಕೂಡಾ ಪೋಲಾಗುತ್ತಿರುವುದಕ್ಕೆ ಸರ್ಕಾರದ ಇಚ್ಛಾಶಕ್ತಿಯ ಕೊರತೆಯೇ ಕಾರಣವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ-3ರ ಯೋಜನೆ ಅಡಿಯಲ್ಲಿ 9 ಉಪಯೋಜನೆಗಳು ಬರುತ್ತಿದ್ದು, ಇವುಗಳಿಂದ ವಿಜಯಪುರ, ಬಾಗಲಕೋಟೆ, ಗುಲ್ಬರ್ಗ, ರಾಯಚೂರು, ಕೊಪ್ಪಳ, ಗದಗ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿನ ಸುಮಾರು 5.94 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ನೀಡಲು ಯೋಜಿಸಲಾಗಿದೆ.<br><br>ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರಡಿ ಹಂಚಿಕೆಯಾದ ನೀರಿನ ಬಳಕೆಯು ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪು ಕೇಂದ್ರ ಸರ್ಕಾರದಿಂದ ಹೊರಡಿಸುವ ಅಧಿಸೂಚನೆಗೆ ಒಳಪಟ್ಟಿರುತ್ತದೆ.<br><br>ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರಡಿಯಲ್ಲಿ 9 ಉಪ ಯೋಜನೆಗಳಡಿಯ ಮುಖ್ಯ ಸ್ಥಾವರ, ಮುಖ್ಯ/ಶಾಖಾ ಕಾಲುವೆ ಹಾಗೂ ವಿರತಣಾ ಕಾಲುವೆ ಜಾಲದ ಕಾಮಗಾರಿಗಳನ್ನು ಆಡಳಿತಾತ್ಮಕ ಅನುಮೋದನೆ ಮೇರೆಗೆ ಕೈಗೆತ್ತಿಕೊಂಡು ಅನುಷ್ಠಾನಗೊಳಿಸಲಾಗುತ್ತದೆ. ಪೂರ್ಣಗೊಂಡ ಕಾಲುವೆ ಜಾಲಗಳಡಿ ಪ್ರಾಯೋಗಿಕವಾಗಿ ನೀರನ್ನು ಹರಿಸಿ ಕಾಲುವೆ ಜಾಲದ ಗುರುತ್ವಾಕರ್ಷಣೆಯಿಂದ/ಲಿಫ್ಟ್ ಮುಖಾಂತರ ಅಚ್ಚುಕಟ್ಟು ವ್ಯಾಪ್ತಿಯಲ್ಲಿ ಬರುವ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳಿಗೆ ಬೇಸಿಗೆ ಕಾಲದಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಲುವಾಗಿ ಕೆರೆಗಳಿಗೆ ನೀರು ತುಂಬಿಸಲಾಗುತ್ತಿದೆ.<br><br>ಕೇಂದ್ರ ಸರ್ಕಾರದಿಂದ ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪಿನ ಗೆಜೆಟ್ ಅಧಿಸೂಚನೆ ಶೀಘ್ರವಾಗಿ ಹೊರಡಿಸಲು ಕೇಂದ್ರ ಸರ್ಕಾರದೊಂದಿಗೆ ಸಮನ್ವಯ ಸಾಧಿಸಲಾಗುತ್ತಿದೆ. |
| ಆ) | ಹಾಗಿಲ್ಲದಿದ್ದಲ್ಲಿ ಈ ಯೋಜನೆಯನ್ನು ಪೂರ್ಣಗೊಳಿಸಲು ಕಾಲಮಿತಿಯ ಕ್ರಿಯಾ ಯೋಜನೆಯನ್ನೇನಾದರೂ ರೂಪಿಸಲಾಗಿದೆಯೇ; (ವಿವರ ನೀಡುವುದು) | |
| ಇ) | ಪ್ರಸಕ್ತ ವರ್ಷದಲ್ಲಿ ಮೀಸಲಿರಿಸಿದ 6252 ಕೋಟಿ ಹಣದಲ್ಲಿ ವ್ಯಯಿಸಲಾದ ಮೊತ್ತವೆಷ್ಟು? (ವಿವರ ನೀಡುವುದು) | 2023-24ನೇ ಸಾಲಿನ ನವೆಂಬರ್-2023ರ ಅಂತ್ಯದ ವರೆಗೆ ಒಟ್ಟಾರೆ ರೂ.2901.64 ಕೋಟಿ ವೆಚ್ಚ ಮಾಡಲಾಗಿರುತ್ತದೆ. |

ಸಂಖ್ಯೆ: ಜಸಂಇ 125 ಡಬ್ಲ್ಯೂಬಿಎಂ 2023

(ಡಿ.ಕೆ.ಶಿವಕುಮಾರ್)
ಉಪ ಮುಖ್ಯಮಂತ್ರಿಗಳು